# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 115 |
| ಮಾನ್ಯ ಸದಸ್ಯರ ಹೆಸರು | | ಡಾ|| ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | | 11.08.2025 |
| | ಪ್ರಶ್ನೆ | ಉತ್ತರ |
| ಅ) | ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಪರೀಕ್ಷಾ ವಿಭಾಗದಲ್ಲಿ ನಡೆದ ಬಹುಕೋಟಿ (ರೂ. 11 ಕೋಟಿ) ಅಂಕಪಟ್ಟಿ ಹಗರಣದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ ಪರೀಕ್ಷಾ ವಿಭಾಗದಲ್ಲಿ ನಡೆದ ಅಂಕಪಟ್ಟಿ ಹಗರಣ ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಆ) | ಗುಲಬರ್ಗಾ ವಿಶ್ವವಿದ್ಯಾಲಯದಲ್ಲಿ 2011 ರಿಂದ 2024ರವರೆಗೆ ವಿದ್ಯಾರ್ಥಿಗಳಿಗೆ ಅಂಕಪಟ್ಟಿ ನೀಡದೇ ಭೌತಿಕ ಅಂಕಪಟ್ಟಿ ಮುದ್ರಿಸಿ ವಿಶ್ವವಿದ್ಯಾಲಯಕ್ಕೆ ನಷ್ಟ ಉಂಟುಮಾಡಿರುವುದಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ: | ಗುಲಬರ್ಗಾ ವಿಶ್ವವಿದ್ಯಾಲಯದ ಅಂಕಪಟ್ಟಿ ಹಗರಣಕ್ಕೆ ಸಂಬಂಧಿಸಿದಂತೆ ಸರ್ಕಾರಕ್ಕೆ ದೂರು ಸ್ವೀಕೃತವಾಗಿದ್ದು, ಸದರಿ ದೂರಿನ ಕುರಿತು ಸತ್ಯಾಸತ್ಯತೆಯನ್ನು ತಿಳಿಯಲು ಗುಲ್ಬರ್ಗಾ ವಿಶ್ವವಿದ್ಯಾಲಯದಿಂದ ವರದಿಯನ್ನು ಪಡೆಯಲಾಗಿರುತ್ತದೆ.<br><br>ಸದರಿ ವರದಿಯಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯವು ಅಂಕಪಟ್ಟಿ ಮುದ್ರಣಕ್ಕೆ ಸಂಬಂಧಿಸಿದಂತೆ ರೂ. 11,67,74,305/- ಗಳ ವೆಚ್ಚ ಮಾಡಿರುವುದಾಗಿ ಹಾಗೂ ಆ ಅವಧಿಯಲ್ಲಿ ಕರ್ತವ್ಯ ನಿರ್ವಹಿಸಿದ ಅಧಿಕಾರಿ/ಸಿಬ್ಬಂದಿಗಳ ಹೆಸರು ಮತ್ತು ಪದನಾಮದೊಂದಿಗೆ ವರದಿಯನ್ನು ನೀಡಿರುತ್ತದೆ. |
| ಇ) | ಈ ಅಂಕಪಟ್ಟಿ ಹಗರಣದಲ್ಲಿ ವಿಶ್ವವಿದ್ಯಾಲಯದ 11 ಜನ ಅಧಿಕಾರಿಗಳು ಇದರಲ್ಲಿ ಭಾಗಿಯಾಗಿದ್ದಾರೆ ಎಂದು ಕುಲಸಚಿವರು ತಮ್ಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರೂ ಕ್ರಮಜರುಗಿಸದಿರಲು ಕಾರಣವೇನು: | ಗುಲ್ಬರ್ಗಾ ವಿಶ್ವವಿದ್ಯಾಲಯವು ಸರ್ಕಾರಕ್ಕೆ ಸಲ್ಲಿಸಿರುವ ವರದಿಯನ್ನು ಪರಿಶೀಲಿಸಲಾಗಿ, ಅಂಕಪಟ್ಟಿ ಮುದ್ರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರವು ಹೊರಡಿಸಿರುವ ಆದೇಶಗಳನ್ನು ಉಲ್ಲಂಘಿಸಿ ಗುಲ್ಬರ್ಗಾ ವಿಶ್ವವಿದ್ಯಾಲಯದಲ್ಲಿ ನಿಯಮಬಾಹಿರವಾಗಿ ಅಂಕಪಟ್ಟಿ ಹಾಗೂ ಪದವಿ ಪ್ರಮಾಣಪತ್ರಗಳನ್ನು ಮುದ್ರಿಸಿ ಅಂದಾಜು ರೂ. 11.00 ಕೋಟಿಯಷ್ಟು ವಿಶ್ವವಿದ್ಯಾಲಯಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ವಿಶ್ವವಿದ್ಯಾಲಯದ ಅಧಿಕಾರಿ/ನೌಕರರ ವಿರುದ್ಧ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ, 2000ರ ಪ್ರಕರಣ 8ರಡಿ ಶಿಸ್ತು ಕ್ರಮಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ. |
| ಈ) | ಅಂಕಪಟ್ಟಿ ಹಗರಣದಿಂದ ವಿದ್ಯಾರ್ಥಿಗಳು ತೊಂದರೆ ಅನುಭವಿಸಿದ್ದು, ಇಂತಹ ಭ್ರಷ್ಟಾಚಾರಕ್ಕೆ ವಿಶ್ವವಿದ್ಯಾಲಯಕ್ಕೆ ಕೆಟ್ಟ ಹೆಸರು ಬಂದರೂ ಸರ್ಕಾರ ಮೌನವಹಿಸಲು ಕಾರಣಗಳೇನು: | |
| ಉ) | ಅಂಕಪಟ್ಟಿ ಹಗರಣದಲ್ಲಿ ಭಾಗಿಯಾದವರ ವಿರುದ್ಧ ತಕ್ಷಣವೇ ಕಾನೂನಾತ್ಮಕವಾಗಿ ಕ್ರಮ ಕೈಗೊಂಡು ವಿಶ್ವವಿದ್ಯಾಲಯದಲ್ಲಿ ನಡೆಯುತ್ತಿರುವ ಭ್ರಷ್ಟಾಚಾರ ತಡೆಯಲು ಸರ್ಕಾರ ಕ್ರಮ ಕೈಗೊಳ್ಳುವುದೇ? | |

ಸಂಖ್ಯೆ: ಇಡಿ 136 ಯುಜಿವಿ 2025

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು